ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/ಒ೦/ಇಸಿಎಸ್(1)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com
ದಿನಾಂಕ: 25.07.2024.

## ಸುತ್ತೋಲೆ

ವಿಷಯ: ಜುಲೈ 2024 ರ ಡಿಪ್ಲೋಮ Makeup (SEE) ಪರೀಕ್ಷೆಯಲ್ಲಿ ದಿನಾಂಕ:25.07.2024 ರಂದು ನಡೆಯಬೇಕಾಗಿದ್ದ ಥಿಯರಿ ಪರೀಕ್ಷೆಗಳನ್ನು ಮುಂದೂಡಿರುವ ಬಗ್ಗೆ.

ಉಲ್ಲೇಖ:
1. ಜಿಲ್ಲಾಧಿಕಾರಿಗಳ ಕಾರ್ಯಾಲಯ, ಉತ್ತರ ಕನ್ನಡ, ಕಾರವಾರ ಇವರ ಪತ್ರ ಸಂಖ್ಯೆ: ಸಿಎಎಲ್/ವಿವ-15/2023-24, ದಿನಾಂಕ: 24.07.2024.
2. ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ ಇವರ ಪತ್ರ ಸಂಖ್ಯೆ: ಸಿಎಎಲ್/ವಿವ-14/2024-25, ದಿನಾಂಕ: 24.07.2024.

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯಾದ್ಯಾಂತ ಕರಾವಳ ಜಿಲ್ಲೆಗಳು/ಇತರೆ ಜಿಲ್ಲೆಗಳಲ್ಲಿ ತೀವ್ರ ಮಳೆಯಾಗುವ ಮುನ್ಸೂಚನೆಯ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಉಲ್ಲೇಖ(1) ಹಾಗೂ ಉಲ್ಲೇಖ(2) ರಲ್ಲಿ ಜಿಲ್ಲಾಧಿಕಾರಿಗಳು ದಿನಾಂಕ: 25.07.2024 ರಂದು ಕರಾವಳ/ಇತರೆ ಜಿಲ್ಲೆಗಳಲ್ಲಿ ರಜೆ ಘೋಷಿಸಿ ಆದೇಶಿಸಿರುತ್ತಾರೆ. ಆದಕಾರಣ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂಧ ಜುಲೈ 2024 ರ ಡಿಪ್ಲೋಮ Makeup (SEE) ಪರೀಕ್ಷೆಯಲ್ಲಿ ದಿನಾಂಕ:25.07.2024 ರಂದು ಜರುಗಬೇಕಾಗಿದ್ದ ಎಲ್ಲಾ ಥಿಯರಿ ವಿಷಯಗಳ ಪರೀಕ್ಷೆಗಳನ್ನು ಮುಂದೂಡಲಾಗಿದೆ. ಸದರಿ ಮುಂದೂಡಲಾದ ಪರೀಕ್ಷೆಗಳನ್ನು ನಡೆಸುವ ಸಂಬಂಧ ದಿನಾಂಕವನ್ನು ಮುಂದಿನ ದಿನಗಳಲ್ಲಿ ತಿಳಸಲಾಗುವುದು.

ಈ ವಿಷಯವನ್ನು ವಿದ್ಯಾರ್ಥಿಗಳು/ ಉಪನ್ಯಾಸಕರುಗಳು/ ಪೋಷಕರುಗಳ ಗಮನಕ್ಕೆ ತಪ್ಪದೇ ತರುವಂತೆ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ತಿಳಸಲಾಗಿದೆ.

ಕಾರ್ಯದರ್ಶಿ

ಇವರಿಗೆ,

1) ರಾಜ್ಯದ ಎಲ್ಲಾ Makeup 2024 ಥಿಯರಿ ಪರೀಕ್ಷಾ ಕೇಂದ್ರಗಳ ಪ್ರಾಂಶುಪಾಲರುಗಳು/ ಮುಖ್ಯ ಅಧೀಕ್ಷಕರು/ ಮುಖ್ಯ ವೀಕ್ಷಕರು/ ಉಪ ಮುಖ್ಯ ಅಧೀಕ್ಷಕರುಗಳಿಗೆ – ಮಾಹಿತಿಗಾಗಿ ಮತ್ತು ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಪರೀಕ್ಷಾ ಕೊಠಡಿಗಳಲ್ಲಿ ಪರಿಚಲನೆ ಮೂಲಕ ಪ್ರಚುರಪಡಿಸಲು.

2) ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ/ ಖಾಸಗಿ ಪ್ರಾಂಶುಪಾಲರುಗಳು– ಮಾಹಿತಿಗಾಗಿ ಮತ್ತು ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಪರೀಕ್ಷಾ ಕೊಠಡಿಗಳಲ್ಲಿ ಪರಿಚಲನೆ ಮೂಲಕ ಪ್ರಚುರಪಡಿಸಲು.

ಪ್ರತಿ:
1. ಮಾನ್ಯ ಆಯುಕ್ತರ ಆಪ್ತ ಶಾಖೆ.
2. ಮಾನ್ಯ ನಿರ್ದೇಶಕರ ಆಪ್ತಶಾಖೆ
3. ಶ್ರೀ ಹರೀಶ ಶೆಟ್ಟಿ- ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ
4. ಇ-ಗವರ್ನೆನ್ಸ್ ವಿಭಾಗ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
5. ಗಣಕ ಕೇಂದ್ರ- ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು